# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 813

ಸದಸ್ಯರ ಹೆಸರು : ಶ್ರೀ. ಐವನ್ ಡಿ' ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರಿಸುವ ಸಚಿವರು : ತೋಟಗಾರಿಕೆ ಹಾಗೂ ಗಣಿ ಮತ್ತು ಭೂ ವಿಜ್ಞಾನ ಸಚಿವರು.

ಉತ್ತರಿಸುವ ದಿನಾಂಕ : 23.07.2024

| ಕ್ರ.ಸಂ | ಪ್ರಶ್ನೆ | | ಉತ್ತರ |
|---|---|---|---|
| ಅ) | ಕರ್ನಾಟಕದಲ್ಲಿ ಯಾವ ಯಾವ ಜಿಲ್ಲೆಗಳಲ್ಲಿ ಅಡಿಕೆ ಬೆಳೆಯನ್ನು ಬೆಳೆಸಲಾಗುತ್ತಿದೆ; ಅಡಿಕೆ ಬೆಳೆಗೆ ರೋಗ ಬಂದಾಗ ಬೆಳೆಗಾರರಿಗೆ ಸಹಾಯ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು;(ವಿವರ ನೀಡುವುದು) | | ಅಡಿಕೆ ಎಲೆ ಚುಕ್ಕೆ ಹಾಗೂ ಹಳದಿ ಎಲೆ ರೋಗದ ಬಾಧೆಯನ್ನು ವೈಜ್ಞಾನಿಕವಾಗಿ ನಿಯಂತ್ರಿಸಲು ಹಾಗೂ ಹಾನಿಗೀಡಾಗಿರುವ ಅಡಿಕೆ ತೋಟಗಳ ಪುನಶ್ಚೇತನಕ್ಕೆ ಇಲಾಖಾ ವತಿಯಿಂದ ತೆಗೆದುಕೊಂಡ ಕ್ರಮಗಳು ಈ ಕೆಳಗಿನಂತಿವೆ.<br>1. ಅಡಿಕೆ ಎಲೆಚುಕ್ಕೆ ರೋಗ ಹಾಗೂ ಹಳದಿ ಎಲೆ ರೋಗಗಳ ನಿಯಂತ್ರಣಕ್ಕಾಗಿ ಕೇಂದ್ರ ಸರ್ಕಾರ ನೇಮಿಸಿರುವ ವೈಜ್ಞಾನಿಕ ತಂಡದ ಸಮಿತಿಯು ರೋಗ ಬಾಧಿತ ಜಿಲ್ಲೆಗಳಾದ ಚಿಕ್ಕಮಗಳೂರು, ಶಿವಮೊಗ್ಗ ಮತ್ತು ದಕ್ಷಿಣ ಕನ್ನಡ ಜಿಲ್ಲೆಗಳಿಗೆ ಭೇಟಿ ನೀಡಿ ಎಲೆ ಚುಕ್ಕೆ ರೋಗದ ಹರಡುವಿಕೆಗೆ ಪ್ರಮುಖ ಕಾರಣಗಳು, ರೋಗದ ತೀವ್ರತೆ ಮತ್ತು ಹಾನಿಯ ಪ್ರಮಾಣದ ಬಗ್ಗೆ ಪರಿಶೀಲಿಸಿ ಶಿಫಾರಸ್ಸಿನಂತೆ ಫೈಟೋಸ್ಯಾನಿಟರಿ ಕ್ರಮಗಳ ಅಳವಡಿಕೆ (ರೋಗ ಬಾಧಿತ ಸಸ್ಯದ ಭಾಗಗಳನ್ನು ತೆಗೆಯುವುದು ಮತ್ತು ನಾಶಪಡಿಸುವುದು), ಪೋಷಕಾಂಶಗಳ ನಿರ್ವಹಣೆ, ಸಸ್ಯ ಸಂರಕ್ಷಣೆ ಕ್ರಮಗಳ ಅಳವಡಿಕೆ ಹಾಗೂ ತಾಂತ್ರಿಕ ಮಾಹಿತಿ ಕುರಿತು ಅರಿವು ಮೂಡಿಸುವ ಕಾರ್ಯಕ್ರಮಗಳಿಗೆ ಎಲೆ ಚುಕ್ಕೆ ರೋಗದಿಂದ ಹಾನಿಯಾಗಿರುವ ಸುಮಾರು 54,000 ಹೆಕ್ಟೇರ್ ಪ್ರದೇಶಕ್ಕೆ ರೂ.225.73 ಕೋಟಿಗಳಿಗೆ ಪ್ರಸ್ತಾವನೆ ಸಿದ್ಧಪಡಿಸಿ ಕೇಂದ್ರಿಯ ತೋಟದ ಬೆಳೆಗಳ ಸಂಶೋಧನಾ ಸಂಸ್ಥೆ(CPCRI)ರವರ ಮೂಲಕ ಕೇಂದ್ರ ಸರ್ಕಾರಕ್ಕೆ ಸಲ್ಲಿಸಲಾಗಿರುತ್ತದೆ.<br>2. ಕೇಂದ್ರ ಹಾಗೂ ರಾಜ್ಯ ಸರ್ಕಾರದ 60:40 ರ ಅನುಪಾತದಲ್ಲಿ 2 ವರ್ಷಗಳ ಅವಧಿಯಲ್ಲಿ ಪ್ರತಿ ವರ್ಷಕ್ಕೆ ರೂ.112.83 ಕೋಟಿಗಳಿಗೆ ಪ್ರಸ್ತಾವನೆಯನ್ನು ಸಿದ್ಧಪಡಿಸಿ ಕೇಂದ್ರ ಸರ್ಕಾರಕ್ಕೆ ಸಲ್ಲಿಸಲಾಗಿದ್ದು, ಅನುಮೋದನೆ ನಿರೀಕ್ಷಿಸಲಾಗಿದೆ.<br>3. ಈ ರೋಗಗಳ ನಿಯಂತ್ರಣದ ಕುರಿತು ಸಂಶೋಧನೆ ಕೈಗೊಳ್ಳಲು ಕೃಷಿ ಮತ್ತು ತೋಟಗಾರಿಕೆ ವಿಶ್ವ ವಿದ್ಯಾಲಯ, ಶಿವಮೊಗ್ಗ ರವರು ರೂಪಿಸಿರುವ ರೂ.775 ಲಕ್ಷಗಳ ಪ್ರಸ್ತಾವನೆಯನ್ನು ನಬಾರ್ಡ್ ನೆರವಿನ RIDF TRANCH-30 ರಡಿ ಒದಗಿಸಲು ಆರ್ಥಿಕ ಇಲಾಖೆಗೆ ಸಲ್ಲಿಸಲಾಗಿದೆ ಹಾಗೂ ರಾಷ್ಟ್ರೀಯ ತೋಟಗಾರಿಕೆ ಮಿಶನ್ ಯೋಜನೆಯ MIDH ನ "INNOVATIVE RESEARCH COMPONENT" ಅಡಿಯಲ್ಲಿ ರೂ. 689 |

| | | | |
|---|---|---|---|
| | | | ಲಕ್ಷಗಳಿಗೆ ಪ್ರಸ್ತಾವನೆಯನ್ನು ಕೇಂದ್ರ ಸರ್ಕಾರಕ್ಕೆ ಸಲ್ಲಿಸಲಾಗಿದ್ದು, ಅನುಮೋದನೆ ನಿರೀಕ್ಷಿಸಲಾಗಿದೆ.<br>4. ಅಡಿಕೆ ಮರಗಳಲ್ಲಿ ಸಸ್ಯ ಸಂರಕ್ಷಣಾ ಔಷಧಿ ಸಿಂಪಡಣೆಗೆ ಹಾಗೂ ಕಟಾವು ಮಾಡಲು ತೋಟಗಾರಿಕೆಯಲ್ಲಿ ಯಾಂತ್ರೀಕರಣ ಯೋಜನೆಯಡಿ ಕಾರ್ಬನ್ ಫೈಬರ್ ದೋಟಿ ಖರೀದಿಸಲು ಸಾಮಾನ್ಯ ವರ್ಗದ ರೈತರಿಗೆ ಶೇಕಡಾ 40 ರಂತೆ ರೂ.40,000/- ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ರೈತರಿಗೆ ಶೇಕಡಾ 50 ರಂತೆ ರೂ.50,000/- ಸಹಾಯಧನ ನೀಡಲಾಗುತ್ತಿದೆ.<br>5. ರಾಷ್ಟ್ರೀಯ ತೋಟಗಾರಿಕೆ ಮಿಶನ್ ಯೋಜನೆಯ ಉಪ ಕಾರ್ಯಕ್ರಮವಾದ ಸಮಗ್ರ ರೋಗ/ಕೀಟಗಳ ಹಾಗೂ ಪೋಷಕಾಂಶಗಳ ನಿರ್ವಹಣೆ ಘಟಕದಡಿ ಅಂದಾಜು ವೆಚ್ಚ ರೂ.4000 ಗಳಾಗಿದ್ದು, ಇದರಲ್ಲಿ ಶೇ.30 ರಂತೆ, ಪ್ರತಿ ಹೆಕ್ಟೇರ್ ಗೆ ರೂ.1200 ರಂತೆ 4 ಹೆಕ್ಟೇರ್ ವರೆಗೆ ಸಹಾಯಧನ ನೀಡಲಾಗುತ್ತಿದೆ.<br>6. 2022-23 ನೇ ಸಾಲಿನಲ್ಲಿ ಅಡಿಕೆ ಹಳದಿ ಎಲೆ ರೋಗ ಬಾಧೆಗೆ ನಿರ್ಧಿಷ್ಟವಾದ ಕಾರಣಗಳನ್ನು ಕಂಡು ಹಿಡಿಯಲು ಕೇಂದ್ರಿಯ ತೋಟದ ಬೆಳೆಗಳ ಸಂಶೋಧನಾ ಕೇಂದ್ರ (CPCRI) ವಿಟ್ಲ, ದಕ್ಷಿಣ ಕನ್ನಡ ರವರಿಗೆ ರೂ.50.00 ಲಕ್ಷಗಳ ಅನುದಾನ ಒದಗಿಸಿದ್ದು, ಸಂಶೋಧನೆ ಪ್ರಗತಿಯಲ್ಲಿರುತ್ತದೆ.<br>7. 2023-24 ನೇ ಸಾಲಿನಲ್ಲಿ ಅಡಿಕೆ ಎಲೆಚುಕ್ಕೆ ರೋಗದ ನಿಯಂತ್ರಣೆ ಕುರಿತು ಸಂಶೋಧನೆ ಕೈಗೊಳ್ಳಲು ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಶಿವಮೊಗ್ಗ ರವರಿಗೆ ರೂ.43.61 ಲಕ್ಷಗಳ ಅನುದಾನವನ್ನು ನೀಡಲಾಗಿದ್ದು, ಸಂಶೋಧನೆಯು ಪ್ರಗತಿಯಲ್ಲಿರುತ್ತದೆ.<br>8. 2022-2023 ಹಾಗೂ 2023-24 ನೇ ಸಾಲಿನಲ್ಲಿ ಸಮಗ್ರ ತೋಟಗಾರಿಕೆ ಅಭಿವೃದ್ಧಿ ಯೋಜನೆಯಡಿ ಅಡಿಕೆ ಹಳದಿ ಎಲೆ ರೋಗ ಬಾಧಿತ ಪ್ರದೇಶಗಳಲ್ಲಿ ಅಡಿಕೆ ಬೆಳೆಯ ಬದಲಾಗಿ ಇತರೆ ವಾಣಿಜ್ಯ ತೋಟಗಾರಿಕೆ ಬೆಳೆಗಳಾದ ಬಾಳೆ, ತೆಂಗು, ಕಾಫಿ, ಕೋಕೋ, ಕಾಳು ಮೆಣಸು, ಜಾಯಿಕಾಯಿ, ಬೆಣ್ಣೆ ಹಣ್ಣು ಹಾಗೂ ಇತರೆ ಬೆಳೆಗಳನ್ನು ಬೆಳೆಯಲು ಆಯಾ ಬೆಳೆಗೆ ಅನುಗುಣವಾಗಿ ಶೇ.40 ರಷ್ಟು ಪ್ರತಿ ಹೆಕ್ಟೇರ್ ಗೆ ರೂ.11952 ರಿಂದ ರೂ.123483 ರವರೆಗೆ ಸಹಾಯಧನವನ್ನು 4 ಹೆಕ್ಟೇರ್ ವರೆಗೆ ನೀಡಲಾಗಿದೆ.<br>9. 2023-24ನೇ ಸಾಲಿನಲ್ಲಿ ಅಡಿಕೆ ಎಲೆಚುಕ್ಕೆ ರೋಗ ಭಾದಿತ ರೈತರಿಗೆ ಪ್ರತಿ ಹೆಕ್ಟೇರ್‌ಗೆ ರೂ.4000.00 ಗಳಂತೆ 1.5 ಹೆಕ್ಟೇರ್ ವರೆಗೆ ಪ್ರತಿ ಫಲಾನುಭವಿಗೆ ಗರಿಷ್ಠ ರೂ.6000/- ಮೊತ್ತದ ಸಸ್ಯ ಸಂರಕ್ಷಣಾ ಔಷಧಿಗಳನ್ನು ವಿತರಿಸಲಾಗಿದೆ. 6250 ಹೆಕ್ಟೇರ್ ಪ್ರದೇಶಕ್ಕೆ ರೂ. 250.00 ಲಕ್ಷಗಳ ಅನುದಾನವನ್ನು ವಿನಿಯೋಗಿಸಲಾಗಿದೆ. |

| | | | |
|---|---|---|---|
| | | | 10. ಇಲಾಖಾ ವತಿಯಿಂದ ಅಡಿಕೆ ತೋಟಗಳ ಪೋಷಕಾಂಶ ನಿರ್ವಹಣೆ, ಬಸಿ ಕಾಲುವೆಗಳನ್ನು ಮಾಡುವುದು, ಹಸಿರೆಲೆ ಗೊಬ್ಬರದ ಬಳಕೆ ಹಾಗೂ ರಸ ಗೊಬ್ಬರಗಳ ಪೂರೈಕೆಗಳ ಕುರಿತು ವಿಶ್ವವಿದ್ಯಾಲಯದ ತಜ್ಞರು ಹಾಗೂ ಇಲಾಖೆಯ ಅಧಿಕಾರಿಗಳ ಸಹಯೋಗದೊಂದಿಗೆ ಕೈಪಿಡಿ, ಕರಪತ್ರಗಳು ಮತ್ತಿತರೆ ಸಮೂಹ ಮಾಧ್ಯಮಗಳ ಮೂಲಕ ಪ್ರಚಾರ ಕೈಗೊಳ್ಳಲಾಗುತ್ತಿದೆ ಹಾಗೂ ತರಬೇತಿ/ಕಾರ್ಯಾಗಾರಗಳ ಮೂಲಕ ರೈತರಿಗೆ ಅರಿವು ಮೂಡಿಸಲಾಗಿದೆ. |
| ಆ) | ಅಡಿಕೆ ಬೆಳೆ ಸಹಾಯ ಮಾಡಲು ಮತ್ತು ಬೆಲೆಯನ್ನು ನಿಯಂತ್ರಣದಲ್ಲಿರಿಸಲು ಅಡಿಕೆ ಬೆಳೆಗಾರರ ನಿಗಮ ಮಾಡಬೇಕೆಂಬ ಬೇಡಿಕೆಯನ್ನು ಇಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು; | | ಸರ್ಕಾರದ ಗಮನಕ್ಕೆ ಬಂದಿದೆ.<br>ಅಡಿಕೆ ಬೆಳೆಗಾರರ ನಿಗಮ ಸ್ಥಾಪಿಸಲು ಕೇಂದ್ರ ಸರ್ಕಾರಕ್ಕೆ ಮನವಿ ಸಲ್ಲಿಸಲಾಗಿತ್ತು, ಹಲವಾರು ಸರ್ಕಾರಿ ಸಂಸ್ಥೆಗಳಾದ CPCRI (Central Plantation Crops Research Institute), ಕಾಸರಗೋಡು, ಅಡಿಕೆ ಮತ್ತು ಸಾಂಬಾರು ಬೆಳೆಗಳ ಅಭಿವೃದ್ಧಿ ನಿರ್ದೇಶನಾಲಯ (DASD), KOZHIKODE, ಕೇರಳ, Central Arecanut and cococa marketing and processing Co-operative Ltd, ಮಂಗಳೂರು ಗಳು ಅಡಿಕೆ ಬೇಸಯವನ್ನು ಪ್ರೋತ್ಸಾಹಿಸಿ ಸಂರಕ್ಷಿಸಲು ಕ್ರಮ ಕೈಗೊಳ್ಳುವುದರಿಂದ ಮತ್ತೊಂದು ಹೊಸ ಸಂಸ್ಥೆಯನ್ನು ರಚಿಸುವುದು ಅನಗತ್ಯವೆಂದು ಕೇಂದ್ರ ಸರ್ಕಾರವು ತಿಳಿಸಿರುತ್ತದೆ. |
| ಇ) | ಅಡಿಕೆ ಬೆಳೆಗಾರರಿಗೆ ಬೆಲೆ ಕುಸಿತಗೊಂಡಾಗ ಅಡಿಕೆಯನ್ನು ಖರೀದಿಸಲು ಸರ್ಕಾರ ಕೈಗೊಂಡಿದೆಯೇ;(ವಿವರ ನೀಡುವುದು) | | ಅಡಿಕೆ ಬೆಳೆಗಾರರಿಗೆ ಬೆಲೆ ಕುಸಿತಗೊಂಡಾಗ ಮಾರುಕಟ್ಟೆ ಮಧ್ಯ ಪ್ರವೇಶ ಮಾರ್ಗಸೂಚಿ ಯೋಜನೆಗಳನ್ವಯ ಕ್ರಮ ಕೈಗೊಳ್ಳಲಾಗುವುದು. |
| ಈ) | ಅಡಿಕೆ ಬೆಳೆಗಾರರಿಗೆ ಸಹಾಯ ಮಾಡಲು ಆವರ್ತ ನಿಧಿಯೊಂದನ್ನು ಸ್ಥಾಪಿಸಲಾಗಿದೆಯೇ? | | ಕೃಷಿ ಮತ್ತು ತೋಟಗಾರಿಕೆ ಉತ್ಪನ್ನಗಳ ಧಾರಣೆಗಳು ಬೆಂಬಲ ಬೆಲೆಗಿಂತ ಕಡಿಮೆಯಾದ ಸಂದರ್ಭಗಳಲ್ಲಿ ಸರ್ಕಾರದಿಂದ ಸ್ಥಾಪಿತವಾಗಿರುವ ಆವರ್ತ ನಿಧಿಯಿಂದ ಬೆಂಬಲ ಬೆಲೆ/ ಮಾರುಕಟ್ಟೆ ಮಧ್ಯಪ್ರವೇಶ ಯೋಜನೆಗಳಡಿಯಲ್ಲಿ ರಾಜ್ಯದ ಮಾರುಕಟ್ಟೆಗಳಲ್ಲಿ ಖರೀದಿಸಲು ಕ್ರಮವಹಿಸಲಾಗುತ್ತಿದೆ.<br>ಅಡಿಕೆ ಬೆಳೆಗಾಗಿ ಪ್ರತ್ಯೇಕ ಆವರ್ತ ನಿಧಿಯನ್ನು ಸ್ಥಾಪಿಸಲಾಗಿರುವುದಿಲ್ಲ. |

HORTI 327 HGM 2024

S. S. [signature]

**(ಎಸ್.ಎಸ್.ಮಲ್ಲಿಕಾರ್ಜುನ್)**

ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಸಚಿವರು